Newsvani.com






## ಸರ್ಕಾರಿ ನೌಕರರನ್ನು ಒಲಿಸಿಕೊಳ್ಳಲು ಕಸರತ್ತು!



# ನಿವೃತ್ತಿ ವಯೋಮಿತಿ ಏರಿಕೆ? ಇಳಿಕೆ? ಗೊಂದದಲ್ಲಿ ಸಿದ್ದು

## ವಾರಕ್ಕೆ ಐದು ದಿನ ಮಾತ್ರ ಕೆಲಸ: ಪ್ರಸ್ತಾಪ ತಳ್ಳಿಹಾಕಿದ ಸಿಎಂ

ಬೆಂಗಳೂರು

**ಬರುವ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಸರ್ಕಾರಿ ನೌಕರರನ್ನು ಒಲಿಸಿಕೊಳ್ಳಲು ಮುಂದಾಗಿರುವ ಮುಖ್ಯ ಮಂತ್ರಿ ಸಿದ್ದರಾಮಯ್ಯ, ಸರ್ಕಾರಿ ನೌಕರರ ನಿವೃತ್ತಿ ವಯೋಮಿತಿಯನ್ನು ಎರಡು ವರ್ಷ ಹೆಚ್ಚಿಸಬೇಕೋ, ಅಥವಾ ಬೇಡವೋ ಎನ್ನುವು ಗೊಂದಲಕ್ಕೆ ಸಿಲುಕಿದ್ದಾರೆ.**

ಚುನಾವಣೆ ಹೊಸ್ತಿಲಲ್ಲಿ ಹಾಲಿ ನೌಕರರ ನಿವೃತ್ತಿ ವಯೋಮಿತಿಯನ್ನು 60 ರಿಂದ 62 ವರ್ಷಕ್ಕೆ ಹೆಚ್ಚಳ ಮಾಡಿದರೆ ಯುವ ಸಮೂಹದ ಆಕ್ರೋಶ ಎದುರಿಸಬೇಕಾಗುತ್ತದೆ. ಇಲ್ಲವಾದಲ್ಲಿ ಹಾಲಿ ಸರ್ಕಾರಿ ನೌಕರರ ಅಸಮಾಧಾನಕ್ಕೆ ಗುರಿಯಾಗಬೇಕಾಗುತ್ತದೆ. ಹೀಗಾಗಿ ಮುಂದೇನು ಮಾಡಬೇಕೆಂಬ ಜಿಜ್ಞಾಸೆಯಲ್ಲಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಮುಖ್ಯಮಂತ್ರಿಯಾಗಿದ್ದ ಬಿ.ಎಸ್. ಯಡಿಯೂರಪ್ಪ ನಿವೃತ್ತಿ ವಯೋಮಿತಿಯನ್ನು 58 ರಿಂದ 60 ವರ್ಷಕ್ಕೆ ಏರಿಕೆ ಮಾಡಿದ್ದರು. ಆಗ ಪ್ರತಿಪಕ್ಷದಲ್ಲಿದ್ದ ಸಿದ್ದರಾಮಯ್ಯ ಸರ್ಕಾರದ ನಿರ್ಧಾರವನ್ನು ಕಟುವಾಗಿ ಟೀಕಿಸಿದ್ದರು. ಇದೀಗ ಅದೇ ಸಿದ್ದರಾಮಯ್ಯ ನಿವೃತ್ತಿ ವಯೋಮಿತಿ ಹೆಚ್ಚಳ ಮಾಡುತ್ತಾರೆಯೇ ಎನ್ನುವ ಪ್ರಶ್ನೆಯೂ ಸಹ ಎದ್ದಿದೆ.

ಸರ್ಕಾರಿ ನೌಕರರ ನಿವೃತ್ತಿ ವಯೋಮಿತಿಯನ್ನು ಹೆಚ್ಚಿಸಿದರೆ ಆಗಬಹುದಾದ ಸಾಧಕ – ಬಾಧಕಗಳ ಬಗ್ಗೆ ಮುಖ್ಯಮಂತ್ರಿ ಅವರು ಈಗಾಗಲೇ ಹಣಕಾಸು ಇಲಾಖೆ ಅಧಿಕಾರಿಗಳಿಂದ ವರದಿ ಕೇಳಿದ್ದು, ಈ ಬೆಳವಣಿಗೆ ಹಲವು ರೀತಿಯ ಚರ್ಚೆಗೆ ಗ್ರಾಸವಾಗಿದೆ. ಆದರೆ ಕೇಂದ್ರ ಸರ್ಕಾರದ ಮಾದರಿಯಲ್ಲಿ ವಾರದಲ್ಲಿ ಆರು ದಿನಗಳ ಬದಲಿಗೆ ಐದು ದಿನಗಳ ಕಾಲ ಸರ್ಕಾರಿ ಕೆಲಸಕ್ಕೆ ಅವಕಾಶ ನೀಡಬೇಕು. ಶನಿವಾರ ಮತ್ತು ಭಾನುವಾರ ರಜೆ ನೀಡಬೇಕೆಂಬ ಮನವಿಗಳನ್ನು ಸಿದ್ದರಾಮಯ್ಯ ಸ್ಪಷ್ಟವಾಗಿ ತಳ್ಳಿ ಹಾಕಿದ್ದಾರೆ.

ರಾಜ್ಯ ಸರ್ಕಾರಿ ನೌಕರರ ಸಂಘ ಈ ಸಂಬಂಧ ವೇತನ ಆಯೋಗಕ್ಕೆ ಮನವಿ ಸಲ್ಲಿಸಿದೆ. ಅಲ್ಲದೇ ಸರ್ಕಾರಕ್ಕೂ ಸಹ ಹಲವು ಬಾರಿ ಮನವಿಗಳನ್ನು ಸಲ್ಲಿಸಲಾಗಿತ್ತಾದರೂ ಇವರ ಬೇಡಿಕೆಗಳು ಈಡೇರಿರಲಿಲ್ಲ. ಇದೀಗ ವೇತನ ಆಯೋಗದ ವರದಿಯ ಮೇಲೆ ಸರ್ಕಾರ ಅಗತ್ಯ ನಿರ್ಧಾರ ತೆಗೆದುಕೊಳ್ಳುವ ನಿರೀಕ್ಷೆಯಿದೆ.

ಪ್ರತಿ ವರ್ಷ ಎರಡು ಲಕ್ಷಕ್ಕೂ ಹೆಚ್ಚು ನೌಕರರು ನಿವೃತ್ತರಾಗುತ್ತಾರೆ. ಈ ಬಾರಿ 2.90 ಲಕ್ಷ ಜನ ಸರ್ಕಾರಿ ನೌಕರರು ನಿವೃತ್ತಿಯಾಗಲಿದ್ದಾರೆ. ನಿವೃತ್ತರ ಸ್ಥಾನ ಮತ್ತು ಖಾಲಿ ಇರುವ 18 ಸಾವಿರ ಹುದ್ದೆಗಳನ್ನು ತುಂಬಿಕೊಳ್ಳಬೇಕಾದ ಪರಿಸ್ಥಿತಿ ಎದುರಾಗಿದೆ. ಇದರಿಂದ ಸರ್ಕಾರಕ್ಕೆ ಹೆಚ್ಚಿನ ಹೊರೆಯಾಗಲಿದೆ.

ಒಂದು ಕಡೆ ನೋಟು ಅಮಾನ್ಯಗೊಳಿಸಿದ ಪರಿಣಾಮ ಮತ್ತೊಂದೆಡೆ ಜಿ.ಎಸ್. ಟಿಯಿಂದ ಆದಾಯ ಕೊರತೆ ಎದುರಿಸುತ್ತಿರುವ ಈ ಸಂದರ್ಭದಲ್ಲಿ ನಿವೃತ್ತಿ ವಯೋಮಿತಿ ಹೆಚ್ಚಳ ಮಾಡಿದರೆ ಸೂಕ್ತ. ಇದರಿಂದ ನಿವೃತ್ತರಿಗೆ ನೀಡುವ ಸವಲತ್ತುಗಳನ್ನು ಎರಡು ವರ್ಷಗಳ ಕಾಲ ಮುಂದೂಡಬಹುದು. ಸಧ್ಯಕ್ಕೆ ಆರ್ಥಿಕ ಸಂಕಷ್ಟದಿಂದ ಪಾರಾಗಬಹುದು ಎನ್ನುವ ಅಭಿಪ್ರಾಯ ಕೇಳಿ ಬಂದಿದೆ.

ಇದರ ಜತೆಗೆ ಒಳಮೀಸಲಾತಿಯ ಗುಮ್ಮವೂ ಸರ್ಕಾರದ ಮುಂದಿದೆ. ಅಲ್ಲಿ ಎಡಗೈ ಮತ್ತು ಬಲಗೈ ಪಂಗಡಗಳಿಗೆ ಮೀಸಲಾತಿಯ ಪ್ರಕಾರ ಸೌಲಭ್ಯ ಒದಗಿಸಬೇಕಾಗುತ್ತದೆ. ಇಂತಹ ಸಂದರ್ಭದಲ್ಲಿ ಸರ್ಕಾರಿ ನೌಕರರಿಗೆ ನೀಡುವ ಸವಲತ್ತುಗಳನ್ನು ಲೆಕ್ಕ ಹಾಕಲಾಗಿದೆ. ನಿವೃತ್ತಿಯಾಗಲಿರುವ 2.90 ಲಕ್ಷ ನೌಕರರ ಸ್ಥಾನ ತುಂಬಲು ಮೀಸಲಾತಿ ಅಳವಡಿಸಿ ರೋಸ್ಟರ್ ಪ್ರಕಾರವೇ ಖಾಲಿ ಹುದ್ದೆಗಳನ್ನು ತುಂಬಿಕೊಳ್ಳಬೇಕು. ಆಗಿನ ಸಂದರ್ಭದಲ್ಲಿ ಒಳಮೀಸಲಾತಿ ಹಾಗೂ ಮೀಸಲಾತಿ ಪ್ರಕಾರವಾದರೆ ಉಳಿದ ಸಮುದಾಯದವರ ಅಸಮಾಧಾನಕ್ಕೆ ನಾವು ಕಾರಣವಾಗಬಾರದು ಎಂಬುದು ಸಿದ್ದರಾಮಯ್ಯ ಅವರ ಲೆಕ್ಕಾಚಾರ.

ಆದರೆ ನಿವೃತ್ತಿ ವಯಸ್ಸನ್ನು 62ಕ್ಕೆ ಹೆಚ್ಚಿಸುವ ಕ್ರಮಕ್ಕೆ ಸರ್ಕಾರಿ ನೌಕರರಲ್ಲೇ ವಿರೋಧ ವ್ಯಕ್ತವಾಗುತ್ತಿದೆ. ಅನಾರೋಗ್ಯ ಮತ್ತು ಇನ್ನಿತರ ಕಾರಣಗಳಿಂದ ಈಗಾಗಲೇ ಸ್ವಯಂ ನಿವೃತ್ತಿ ಪಡೆಯುವ ನೌಕರರ ಸಂಖ್ಯೆ ಹೆಚ್ಚಾಗಿದೆ. ಹೇಗಾದರೂ ಮಾಡಿ ನನ್ನ ಅವಧಿ ಮುಗಿಸಿದರೆ ಸಾಕು ಎನ್ನುವ ಮಟ್ಟಕ್ಕೆ ಬಂದಿರುವ ನೌಕರರಿಗೆ ಮತ್ತೆ ನಿವೃತ್ತಿ ಅವಧಿ ಹೆಚ್ಚಿಸುವುದು ಬೇಕಾಗಿಲ್ಲ. ಆರನೇ ವೇತನ ಆಯೋಗದಲ್ಲಿ ಸರ್ಕಾರಿ ನೌಕರರಿಗೆ ವೇತನ ಹೆಚ್ಚಿಸಿದರೆ ಸಾಕು. ವೇತನ ಏರಿಕೆಯಾದರೆ ಬಹುತೇಕ ಮಂದಿ ಸ್ವಯಂ ನಿವೃತ್ತಿ ಪಡೆಯಲು ತುದಿಗಾಲಲ್ಲಿ ನಿಂತಿದ್ದಾರೆ. ಹೀಗಿರುವಾಗ ನಿವೃತ್ತಿ ವಯೋಮಿತಿ ಹೆಚ್ಚಿಸುವ ಅಗತ್ಯವಿಲ್ಲ ಎಂದು ಸರ್ಕಾರಿ ನೌಕರರೇ ಗೊಣಗಿಕೊಳ್ಳುತ್ತಿರುವುದು ಎಲ್ಲೆಡೆ ಕಂಡು ಬಂದಿದೆ.